ಸದನದಲ್ಲಿ ಉತ್ತರಿಸುವ ಪ್ರಶ್ನೆ

# ಕರ್ನಾಟಕ ವಿಧಾನ ಪರಿಷತ್ತು

ನೂರ ಮೂವತ್ತೆಂಟನೆಯ ಅಧಿವೇಶನ

ಗುರುವಾರ, ದಿನಾಂಕ: 18ನೇ ಜುಲೈ, 2019

ಚಿಕ್ಕಮಗಳೂರು ಜಿಲ್ಲೆಯ ಕೆ.ಎಸ್.ಆರ್.ಟಿ.ಸಿ. ಬಸ್ಸುಗಳ ಬಗ್ಗೆ

ಶ್ರೀ ಪ್ರಾಣೇಶ್ ಎಂ.ಕೆ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

47 (198) ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ-

(ಅ) ಚಿಕ್ಕಮಗಳೂರು ಜಿಲ್ಲೆಯ ಕೆ.ಎಸ್.ಆರ್.ಟಿ.ಸಿ. ವಿಭಾಗದಲ್ಲಿ ಎಷ್ಟು ಬಸ್ಸುಗಳು ಇವೆ ; (ಡಿಪೋವಾರು ಮಾಹಿತಿ ಒದಗಿಸುವುದು)

(ಆ) ಕೆ.ಎಸ್.ಆರ್.ಟಿ.ಸಿ. ಬಸ್ಸುಗಳನ್ನು ಎಷ್ಟು ವರ್ಷಗಳು ಮತ್ತು ಎಷ್ಟು ಕಿಲೋಮೀಟರ್ ಓಡಿಸಬೇಕೆಂಬ ನಿಯಮವಿದೆ ;

(ಇ) ಚಿಕ್ಕಮಗಳೂರು ವಿಭಾಗದಲ್ಲಿ ಎಷ್ಟು ಅವಧಿ ಮುಗಿದ ಬಸ್ಸುಗಳು ಸಂಚರಿಸುತ್ತಿವೆ; ಅದಕ್ಕೆ ಕಾರಣಗಳೇನು ; ಇದರಿಂದ ಪ್ರಯಾಣಿಕರಿಗೆ ತೊಂದರೆಯಾಗುವುದಿಲ್ಲವೆ : (ವಿವರ ನೀಡುವುದು)

(ಈ) ಅವಧಿ ಮುಗಿದ ಬಸ್ಸುಗಳು ಓಡಿಸುತ್ತಿರುವ ಉದ್ದೇಶವೇನು ; ಇದರಿಂದ ಆಗುವ ಅನಾಹುತಕ್ಕೆ ಯಾರು ಹೊಣೆ ;

(ಉ) ಚಿಕ್ಕಮಗಳೂರು ಕೆ.ಎಸ್.ಆರ್.ಟಿ.ಸಿ. ಬಸ್ಸ್ ನಿಲ್ದಾಣದಲ್ಲಿ ಕಾರ್ಯನಿರ್ವಹಿಸುವ ಟಿ.ಸಿ.ಗಳು ಸಾರ್ವಜನಿಕರಿಗೆ ಸರಿಯಾಗಿ ಮಾಹಿತಿ ನೀಡದೆ ಹಾಗೂ ಸಾರ್ವಜನಿಕರ ಜೊತೆ ಅಸಭ್ಯವಾಗಿ ವರ್ತಿಸುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಾದಲ್ಲಿ ಕೈಗೊಂಡಿರುವ ಕ್ರಮಗಳೇನು ;

(ಊ) ಜಿಲ್ಲೆಯ ಕೆ.ಎಸ್.ಆರ್.ಟಿ.ಸಿ. ಬಸ್ಸು ನಿಲ್ದಾಣದಲ್ಲಿ ಕುಡುಕರು ಮತ್ತು ಭಿಕ್ಷುಕರ ಸಂಖ್ಯೆ ಹೆಚ್ಚಾಗಿ ಪ್ರಯಾಣಿಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಾದಲ್ಲಿ ಸರ್ಕಾರ ಯಾವ ಕ್ರಮ ಕೈಗೊಂಡಿದೆ ? (ವಿವರ ನೀಡುವುದು)